## 14. ಭೂ ನ್ಯಾಯಮಂಡಳಿ ರಚನೆ

ನೆನೆಗುದಿಗೆ ಬಿದ್ದಿದ್ದ 164 ತಾಲ್ಲೂಕುಗಳಲ್ಲಿ ಭೂ ನ್ಯಾಯಮಂಡಳಿ ರಚಿಸಲು ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೂಚನೆ ನೀಡಿದ್ದಾರೆ. ಕಂದಾಯ ಹಾಗೂ ಮುಜರಾಯಿ ಇಲಾಖೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಿಎಂ, ಬಹಳ ಮುಖ್ಯವಾಗಿರುವ ಈ ಇಲಾಖೆ, ಇನ್ನಷ್ಟು ಕ್ರಿಯಾಶೀಲವಾಗಲು ಮುಂದಾಗಬೇಕು ಎಂದರು. ಡ್ರೋಣ್ ಆಧಾರಿತ ಸರ್ವೇ ಸಮಿತ್ವ ಯೋಜನೆಯಡಿ 16,000 ಗ್ರಾಮಗಳನ್ನು ಗುರುತಿಸಲಾಗಿದೆ. ಗ್ರಾಮ ನಿವಾಸಿಗಳಿಗೆ ಅವರ ವಾಸಸ್ಥಳದ ಆಸ್ತಿಗಳಿಗೆ ಪ್ರಾಪರ್ಟಿ ಕಾರ್ಡ್ ವಿತರಿಸುವ ಯೋಜನೆ ಇದಾಗಿದೆ. ದೇಶದ 7 ರಾಜ್ಯಗಳ ಪೈಕಿ ಕರ್ನಾಟಕದಲ್ಲೂ ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದ್ದು, ಇದನ್ನು ತ್ವರಿತವಾಗಿ ಕಾರ್ಯಗತಗೊಳಿಸಲು ಕ್ರಮಕೈಗೊಳ್ಳಬೇಕೆಂದು ಎಂದು ಮುಖ್ಯಮಂತ್ರಿ ಸೂಚಿಸಿದರು. ಕೈಗೆಟುಕುವ ದರಗಳ ಮನೆಗಳನ್ನು ಪ್ರೋತ್ಸಾಹಿಸಲು ರೂ.20 ಲಕ್ಷ ಮೌಲ್ಯದ ಅಪಾರ್ಟ್‌ಮೆಂಟ್‌ಗಳ ಮೊದಲ ನೋಂದಣಿಗೆ ಮುದ್ರಾಂಕ ಶುಲ್ಕವನ್ನು ಶೇ.5 ರಿಂದ 2ಕ್ಕೆ ಇಳಿಸಲು ಹಾಗೂ ರೂ.35 ಲಕ್ಷ ಮೌಲ್ಯದವರೆಗಿನ ನೋಂದಣಿ ಶೇ.5 ರಿಂದ ಶೇ.3ಕ್ಕೆ ಇಳಿಸಲು ಸರ್ಕಾರ ತೀರ್ಮಾನಿಸಿದೆ. ಈ ಬಗ್ಗೆ ಮುಖ್ಯಮಂತ್ರಿ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೋವಿಡ್– 19 ಹಿನ್ನೆಲೆಯಲ್ಲಿ 2020–21ನೇ ಸಾಲಿನಲ್ಲಿ ರೂ.3524 ಕೋಟಿಯಷ್ಟು ಕಡಿಮೆ ರಾಜಸ್ವ ಸಂಗ್ರಹ ಆಗಬಹುದೆಂದು ಅಂದಾಜಿಸಲಾಗಿದೆ. ಸಚಿವರುಗಳಾದ ಆರ್.ಅಶೋಕ, ಕೋಟ ಶ್ರೀನಿವಾಸ ಪೂಜಾರಿ, ಶಾಸಕ ಎಸ್.ಆರ್. ವಿಶ್ವನಾಥ್, ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ಮಂಜುನಾಥ ಪ್ರಸಾದ್ ಸಭೆಯಲ್ಲಿದ್ದರು.

ಆಧಾರ:ವಿಜಯವಾಣಿ, ದಿನಾಂಕ:27.05.2020